ದಿ: ೩೦.೦೬.೨೦೨೨ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ವಾದಿ ಪರವಾಗಿ ಶ್ರೀ ಎಸ್.ಜೆಡ್.ಯು.ಆರ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ೩ ಕಂದಾಯ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ.೧ ರಿಂದ ೩ ಎಂದು, ದಾವಾ ಆಸ್ತಿಯ ತೆರಿಗೆ ಡಿಮ್ಯಾಂಡ್ ರಿಜಿಸ್ಟರ್ ಧೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೪ ಎಂದು, ತೆರಿಗೆ ವಿಧಿಸುವ ಪಟ್ಟಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೫ ಎಂದು, ೨೦೦೭-೦೮ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್ ಮತ್ತು ತೆರಿಗೆ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ.೬ ಮತ್ತು ೭ ಎಂದು, ೯ ಭಾವಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ.೮ ಎಂದು, ಸಿ.ಡಿಯನ್ನು ನಿಪಿ.೮(ಎ) ಎಂದು, ಆಸ್ತಿ ನಂ.೮೧ ನೇದರ ೨೦೧೧-೧೨ನೇ ಸಾಲಿನ ತೆರಿಗೆ ರಿಜಿಸ್ಟರ್ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೯ ಎಂದು , ಆಸ್ತಿ ನಂ.೧೭೭ ನೇದರ ೨೦೧೪-೧೫ ನೇ ಸಾಲಿನ ತೆರಿಗೆ ರಿಜಿಸ್ಟರ್ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೦ ಎಂದು, ಆಸ್ತಿ ನಂ. ೧೭೮ ನೇದರ ೨೦೧೫-೧೬ನೇ ಸಾಲಿನ ತೆರಿಗೆ ರಿಜಿಸ್ಟರ್ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೧ ಎಂದು, ಮತ್ತು ತೆರಿಗೆ ಪಟ್ಟಿಯ ದೃನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೨ ಎಂದು, ೨೦೨೧-೨೨ನೇ ಸಾಲಿನ ತೆರಿಗೆ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೩ ಎಂದು, ಆಸ್ತಿ ನಂ.೪ ನೇದರ ೨೦೧೪-೧೫ನೇ ಸಾಲಿನ ತೆರಿಗೆ ನಿರ್ಧರಣ ಪಟ್ಟಿ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೪ ಎಂದು, ಎರಡು ಕಂದಾಯ ರಸೀದಿಗಳನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.೧೫ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**